ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 21 ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ  ದಿನಾಂಕ : DATE : 25/3/21

**ವಿವಾದಾತ್ಮಕ ಹೇಳಿಕೆ ನೀಡಿದ ಸಚಿವ ಡಾ.ಸುಧಾಕರ್ । ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಶಾಸಕರಿಂದ ಖಂಡನೆ । ಸರಕಾರಕ್ಕೆ ಮುಜುಗರ. ಸಿಎಂ ಬಿಎಸ್‌ವೈ ಕ್ಲಾಸ್**

# ಏಕಪತ್ನಿವ್ರತ ಚಾಲೆಂಜ್

25/3/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

'ಈವರೆಗೂ ಮುಖ್ಯಮಂತ್ರಿಯಿಂದ ಹಿಡಿದು ಸಚಿವರಾಗಿ, ಶಾಸಕರಾಗಿ ಆಡಳಿತ ನಡೆಸಿದವರು ತಮ್ಮ ಜೀವನದಲ್ಲಿ ಯಾವುದೇ ರೀತಿಯ ಅನೈತಿಕ ವ್ಯವಹಾರ ನಡೆಸಿಲ್ಲ ಎಂಬುದನ್ನು ಮೊದಲು ಸಾಬೀತುಪಡಿಸಲಿ' ಎನ್ನುವ ಹೇಳಿಕೆ ಇದೀಗ ರಾಜ್ಯ ರಾಜಕೀಯದಲ್ಲಿ ಭಾರಿ ವಿವಾದ ಸೃಷ್ಟಿಸಿದೆ.

ಗುಂಡು



ಸಚಿವ ಡಾ.ಕೆ ಸುಧಾಕರ್ ಅವರು ಬುಧವಾರ ಸುದ್ದಿಗಾರರಿಗೆ ನೀಡಿದ ಈ ಹೇಳಿಕೆ ವಿವಾದದ ಸ್ವರೂಪ ಪಡೆದುಕೊಂಡು, ವಿಧಾನಸಭೆಯಲ್ಲಿ ಮೂರೂ ಪಕ್ಷಗಳ ಶಾಸಕರ ಕೆಂಗಣ್ಣಿಗೆ ಗುರಿಯಾಯಿತು. ಆರಂಭದಲ್ಲಿ ತಮ್ಮ ಹೇಳಿಕೆಯನ್ನು ಡಿಫೆಂಡ್ ಮಾಡಿಕೊಂಡಿದ್ದರು. ಬಳಿಕ ಸಿಎಂ ಸೂಚನೆ ಮೇರೆಗೆ ಹೇಳಿಕೆ ಹಿಂಪಡೆಯುವುದರೊಂದಿಗೆ ಕ್ಷಮೆ ಕೋರಿದರು.

ಸುಧಾಕರ್ ಅವರ ಈ ಹೇಳಿಕೆಗೆ ಕಾಂಗ್ರೆಸ್, ಜೆಡಿಎಸ್ ಶಾಸಕರು ಮಾತ್ರ ಖಂಡಿಸದೇ, ಸ್ವತಃ ಬಿಜೆಪಿ ಶಾಸಕರು ಹಾಗೂ ವಲಸಿಗ ಮಿತ್ರಮಂಡಳಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಬಿಜೆಪಿ ಶಾಸಕರಾದ ರಾಜೂಗೌಡ, ಎಸ್.ಆರ್.ವಿಶ್ವನಾಥ್ ಸೇರಿದಂತೆ ಕೆಲ ಶಾಸಕರೂ ಸುಧಾಕರ್ ಹೇಳಿಕೆಗೆ ವಿರೋಧ ವ್ಯಕ್ತಪಡಿಸಿದರು. ಸುಧಾಕರ್ ಮಾತನ್ನು ನಾವೂ ವಿರೋಧಿಸುತ್ತೇವೆ. ಅವರ ಹೇಳಿಕೆಯನ್ನು ನಾವು ಒಪ್ಪುವುದಿಲ್ಲ ಎಂದು ಸದನದಲ್ಲಿ ಆಕ್ರೋಶ ವ್ಯಕ್ತಪಡಿಸಿದರು.

→ 4



ಸುಧಾಕರ್ ಹೇಳಿಕೆ ಬಗ್ಗೆ ಹಲವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸದನದ ಹೊರಗಡೆ ಹೇಳಿಕೆ ಕೊಟ್ಟಿದ್ದಾರೆ. ಸದನಕ್ಕೂ ಅದಕ್ಕೂ ಸಂಬಂಧ ಇಲ್ಲ. ಸದನದ ಹೊರಗಡೆ ಕ್ಷಮಾಪಣೆ ಕೇಳಬಹುದು. ಈ ಹೇಳಿಕೆ ಅವರ ವೈಯಕ್ತಿಕ.

-ಬಸವರಾಜ ಬೊಮ್ಮಾಯಿ ಗೃಹ ಸಚಿವ



ಸುಧಾಕರ್ ನನ್ನ ಹೆಸರು ಪ್ರಸ್ತಾಪಿಸಿದ್ದಾರೆ. ಅವರು ಹತಾಶೆಯಿಂದ ಹೇಳಿದ್ದಾರೋ, ದುರುದ್ದೇಶದಿಂದ ಹೇಳಿದ್ದಾರೋ ಗೊತ್ತಿಲ್ಲ. ಆದರೆ ಅವರು ಎಲ್ಲರ ಹೆಸರು ಸೇರಿಸಿದ್ದಾರೆ. ಇದರಿಂದ ನಮ್ಮ ಹಕ್ಕು ಚ್ಯುತಿಯಾಗಿದೆ. ಹಾಗೆಂದರೆ ನಾವು ವ್ಯಭಿಚಾರಿಗಳಾ? ಇದು ವ್ಯಭಿಚಾರಿಗಳ ಸರಕಾರವೇ?

-ಸಿದ್ದರಾಮಯ್ಯ ವಿಧಾನಸಭಾ ಪ್ರತಿಪಕ್ಷ ನಾಯಕ



ಸದನದ ಸದಸ್ಯರ ಬಗ್ಗೆ ಸಂಶಯ ಬರುವ ನಿಟ್ಟಿನಲ್ಲಿ ಯಾರೂ ಭಾವನೆ ವ್ಯಕ್ತಪಡಿಸಬಾರದು. ಯಾವುದೋ ಆಕ್ರೋಶ, ಆವೇಶದಲ್ಲಿ ಸದನದ ಬಗ್ಗೆ ಹಗುರವಾಗಿ ಮಾತನಾಡಬಾರದು. ಎಲ್ಲ ಶಾಸಕರಿಗೆ ಆದ ನೋವಿಗೆ ನಾನು ಜವಾಬ್ದಾರ. ಅದರಲ್ಲಿ ನಾನೂ ಸೇರಿದ್ದೇನೆ.

-ವಿಶ್ವೇಶ್ವರ ಹೆಗಡೆ ಸ್ಪೀಕರ್

## ಸುಧಾಕರ್ ಹೇಳಿದ್ದೇನು?

225 ಶಾಸಕರ ಬಗ್ಗೆ ತನಿಖೆಯಾಗಲಿ. ಯಾರ್‍ಯಾರು ಏಕಪತ್ನಿ ವ್ರತಸ್ಥರು, ಮುಖ್ಯಮಂತ್ರಿಗಳಾಗಿದ್ದಾಗ ಯಾರ್‍ಯಾರು ಏನೇನು ಮಾಡಿದ್ದಾರೆ? ಆಡಳಿತ ನಡೆಸಿದವರು ತಮ್ಮ ಜೀವನದಲ್ಲಿ ಯಾವುದೇ ರೀತಿಯ ಅನೈತಿಕ ವ್ಯವಹಾರ ನಡೆಸಿಲ್ಲ ಎಂಬುದರ ಬಗ್ಗೆ ತನಿಖೆಯಾಗಲಿ. ವಿಧಾನಸಭೆಯಲ್ಲಿರುವ 225 ಜನಪ್ರತಿನಿಧಿಗಳ ಬಗ್ಗೆಯೂ ತನಿಖೆ ಮಾಡಿಸಲಿ. ಯಾರ್‍ಯಾರು ಏನು ಮಾಡಿದ್ದಾರೆಂಬುದು ಜನರಿಗೆ ಗೊತ್ತಾಗಲಿ. ಇವರೆಲ್ಲ ಸತ್ಯ ಹರಿಶ್ಚಂದ್ರರಂತೆ ಈಗ ಮಾತನಾಡುತ್ತಿದ್ದಾರೆ. ತನಿಖೆ ನಡೆದರೆ ಎಲ್ಲವೂ ಗೊತ್ತಾಗಲಿದೆ. ಮಾಜಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಎಚ್.ಡಿ. ಕುಮಾರಸ್ವಾಮಿ, ಮಾಜಿ ಸಚಿವರಾದ ಡಿ.ಕೆ. ಶಿವಕುಮಾರ್, ರಮೇಶ್‌ಕುಮಾರ್ ಇವರೆಲ್ಲರೂ ಸತ್ಯ ಹರಿಶ್ಚಂದ್ರರು, ಏಕಪತ್ನಿ ವ್ರತಸ್ಥರು. ಸಮಾಜಕ್ಕೆ ಮಾದರಿಯಾದವರು ಎಂಬುದು ಎಲ್ಲರಿಗೂ ಗೊತ್ತಾಗಲಿ. ಆಗ ಅವರ ಬಂಡವಾಳ ಗೊತ್ತಾಗುತ್ತದೆ.



ಎಲ್ಲ ಶಾಸಕ ಮಿತ್ರರ ಬಗ್ಗೆ ನನಗೆ ಅಪಾರವಾದ ಗೌರವವಿದೆ. ಹೀಗಾಗಿ ಯಾರಿಗಾದರೂ ನನ್ನ ಹೇಳಿಕೆಯಿಂದ ನೋವಾಗಿದ್ದಲ್ಲಿ ಅದಕ್ಕಾಗಿ ವಿಷಾದ ವ್ಯಕ್ತಪಡಿಸುತ್ತೇನೆ.

- **ಡಾ.ಕೆ. ಸುಧಾಕರ್** ಆರೋಗ್ಯ ಸಚಿವ